# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 213

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 02.02.2021

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಬಡವರ ಹಸಿವು ನೀಗಿಸಲು ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ಅನ್ನಭಾಗ್ಯ ಯೋಜನೆಯ ಅಕ್ಕಿಯು ಮಧ್ಯವರ್ತಿಗಳ ಪಾಲಾಗುವುದನ್ನು ತಡೆಯಲು ಆಗಿದ್ದಾಗ್ಗೆ ತಪಾಸಣೆ ಕೈಗೊಳ್ಳಲಾಗುತ್ತಿದೆ. ಅಕ್ರಮವಾಗಿ ಸಾಗಾಣಿಕೆ/ಸಂಗ್ರಹಣೆ ಮಾಡುವವರ ವಿರುದ್ಧ ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣ ಆದೇಶದನ್ವಯ ಹಾಗೂ ಅಗತ್ಯ ವಸ್ತುಗಳ ಕಾಯ್ದೆಯನ್ವಯ ಪ್ರಕರಣವನ್ನು ದಾಖಲಿಸಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್., ಹಾಗೂ ಎ.ಪಿ.ಎಲ್., ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್‌ಗಟ್ಟಲೆ ಉಳಿಕೆಯಾಗುತ್ತಿದ್ದು, ಕೆಲವು ಅಧಿಕಾರಿಗಳು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನ್ಯಾಯಬೆಲೆ ಅಂಗಡಿಗಳಲ್ಲಿ ಪಿ.ಓ.ಎಸ್ ವ್ಯವಸ್ಥೆಯಲ್ಲಿ ಪಡಿತರ ಚೀಟಿದಾರರಿಗೆ ಆಧಾರ್ ಬಯೋಮೆಟ್ರಿಕ್ ಮುಖಾಂತರ ಆಹಾರ ಧಾನ್ಯಗಳ ವಿತರಣೆ ಮಾಡಲಾಗುತ್ತಿದೆ. ನ್ಯಾಯಬೆಲೆ ಅಂಗಡಿಯಲ್ಲಿ ಉಳಿಕೆಯಾಗುವ ಆಹಾರ ಧಾನ್ಯಗಳನ್ನು ಲೆಕ್ಕಕ್ಕೆ ತೆಗೆದುಕೊಂಡು ಮುಂದಿನ ಮಾಹೆಯ ಹಂಚಿಕೆಯಲ್ಲಿ ಆರಂಭಿಕ ದಾಸ್ತಾನಾಗಿ ಕಡಿತಗೊಳಿಸಲಾಗುತ್ತದೆ. ಇದರಿಂದಾಗಿ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕವನ್ನು ತೋರಿಸಲು ಅವಕಾಶವಿರುವುದಿಲ್ಲ. ಸಾರ್ವಜನಿಕ ವಿತರಣಾ ಪದ್ಧತಿ ಆದೇಶ 2016ರನ್ವಯ ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ತೂಕ, ಅಳತೆ ಮತ್ತು ವಿತರಣೆಯಲ್ಲಿ ವಂಚನೆ ಕಂಡು ಬಂದಲ್ಲಿ ಅಂತಹವರ ವಿರುದ್ಧ ವಂಚನೆ ಪ್ರಕರಣವನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ಈ ಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು; | ರಾಜ್ಯದ ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುತ್ತಿರುವ ಪಡಿತರ ಪದಾರ್ಥಗಳು ಸಂಪೂರ್ಣವಾಗಿ ಫಲಾನುಭವಿಗಳಿಗೆ ತಲುಪಲು ವ್ಯವಸ್ಥೆಯಲ್ಲಿ ಈ ಕೆಳಕಂಡಂತೆ ಸುಧಾರಣೆಗಳನ್ನು ಜಾರಿಗೆ ತರಲಾಗಿದೆ.<br>1.ರಾಜ್ಯದ ಎಲ್ಲಾ ಪಡಿತರ ಚೀಟಿಗಳು ಮತ್ತು ಫಲಾನುಭವಿಗಳನ್ನು ಅವರ ಆಧಾರ್ ನೊಂದಿಗೆ ಜೋಡಣೆ ಮಾಡಲಾಗಿರುತ್ತದೆ.<br>2. ಪ್ರತಿ ಮಾಹೆ ಪಡಿತರ ಪದಾರ್ಥಗಳನ್ನು ನೇರವಾಗಿ ಫಲಾನುಭವಿಗಳಿಗೆ ತಲುಪಿಸಲು ಬಯೋಮೆಟ್ರಿಕ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.<br>3. ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಪಿ.ಓ.ಎಸ್ ವ್ಯವಸ್ಥೆ ಜಾರಿಗೊಳಿಸಿದ್ದು, ನೈಜ ಫಲಾನುಭವಿಗೆ ಬಯೋಮೆಟ್ರಿಕ್ ಮೂಲಕ ಪಾರದರ್ಶಕವಾಗಿ ಪಡಿತರ ವಿತರಣೆಯಾಗುವುದನ್ನು ಖಾತರಿಪಡಿಸಲಾಗುತ್ತದೆ.<br>4. ಪಡಿತರ ಪದಾರ್ಥಗಳನ್ನು ಸಗಟು ಮಳಿಗೆಗಳಲ್ಲಿ ದಾಸ್ತಾನಿರಿಸುವುದು ಹಾಗೂ ನ್ಯಾಯಬೆಲೆ ಅಂಗಡಿಗಳಿಗೆ ಬಿಲ್ಲಿಂಗ್ ಮಾಡುವ ವ್ಯವಸ್ಥೆಯನ್ನು |

| | | |
|---|---|---|
| | | ಕೂಡ ಸಂಪೂರ್ಣ ಗಣಕೀಕರಣಗೊಳಿಸಿ ಆನ್‌ಲೈನ್ ವ್ಯವಸ್ಥೆ ಜಾರಿಯಲ್ಲಿದೆ.<br>5. ಪಡಿತರ ವ್ಯವಸ್ಥೆಯಲ್ಲಿ ಪಾರದರ್ಶಕತೆಯನ್ನು ಜಾರಿಗೆ ತರುವುದರೊಂದಿಗೆ ಫಲಾನುಭವಿಗಳ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು ಕೂಡ ಜಾರಿಗೆ ತರಲು ಆಹಾರ ಅದಾಲತ್, ಜಾಗೃತ ಸಮಿತಿಗಳನ್ನು ರಚಿಸಲಾಗಿದೆ. ಸಹಾಯವಾಣಿ ಸಂಖ್ಯೆ 1967 ಯು ಚಾಲ್ತಿಯಲ್ಲಿರುತ್ತದೆ. ಪಡಿತರ ಹಂಚಿಕೆ ಬಗ್ಗೆ ಪಡಿತರ ಚೀಟಿದಾರರಿಗೆ ಎಸ್.ಎಂ.ಎಸ್ ರವಾನೆ ಇತ್ಯಾದಿ ಕ್ರಮಗಳೂ ಕೂಡ ಜಾರಿಯಲ್ಲಿವೆ.<br>ಮೇಲಿನಂತೆ ಪಡಿತರ ವ್ಯವಸ್ಥೆಯಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಪಾರದರ್ಶಕವಾಗಿ ಪಡಿತರ ಹಂಚಿಕೆ ಜಾರಿಗೊಳಿಸಲು ಕ್ರಮ ವಹಿಸಲಾಗಿದೆ. |
| ಈ | ಸುಳ್ಳು ಲೆಕ್ಕ ತೋರಿಸಿ ಕಾಳ ಸಂತೆಯಲ್ಲಿ ಅನ್ನ ಭಾಗ್ಯದ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿಗಳ ಅಂಗಡಿ ಮಾಲೀಕರು ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು? (ಸ್ಪಷ್ಟ ವಿವರ ನೀಡುವುದು) | ಆನ್‌ಲೈನ್ ಮುಖಾಂತರ ಬಯೋಮೆಟ್ರಿಕ್ ಪಡೆದು ಪಡಿತರ ವಿತರಣೆಯಾಗಿರುವುದರಿಂದ ಸುಳ್ಳು ಲೆಕ್ಕ ತೋರಿಸಲು ಸಾಧ್ಯವಿಲ್ಲ. ಜಿಲ್ಲಾ ಮಟ್ಟದಲ್ಲಿ ಸಹಾಯಕ ಆಯುಕ್ತರು, ಡಿ.ವೈ.ಎಸ್.ಪಿ ತಹಶೀಲ್ದಾರ್, ಆಹಾರ ಶಿರಸ್ತೇದಾರರು ಮತ್ತು ಆಹಾರ ನಿರೀಕ್ಷಕರುಗಳ ನೇತೃತ್ವದಲ್ಲಿ ತಂಡ ರಚಿಸಲಾಗಿದೆ.<br>ನ್ಯಾಯಬೆಲೆ ಅಂಗಡಿ ಮಾಲೀಕರು ಪಡಿತರ ಆಹಾರಧಾನ್ಯಗಳನ್ನು ದುರುಪಯೋಗ ಮಾಡಿಕೊಂಡಲ್ಲಿ ಅಂತಹ ಮಾಲೀಕರ ವಿರುದ್ಧ ಪ್ರಕರಣವನ್ನು ದಾಖಲಿಸಿ ನ್ಯಾಯಬೆಲೆ ಅಂಗಡಿ ಪ್ರಾಧಿಕಾರವನ್ನು ಅಮಾನತ್ತುಗೊಳಿಸುವ ಹಾಗೂ ರದ್ದು ಪಡಿಸುವ ಕ್ರಮವಹಿಸಲಾಗುತ್ತಿದೆ. |

ಆನಾಸ 35 ಡಿಆರ್ ಎ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.